ಸೇತುವೆ ಹಾಗೂ ಕೂಡು ರಸ್ತೆಗಳ ನಿರ್ಮಾಣ ಕಾಮಗಾರಿಯನ್ನು ಜೂನ್ 1990ರಲ್ಲಿ ಪೂರ್ಣಗೊಳಿಸಲಾಯಿತು. ಈ ಕಾಮಗಾರಿಗೆ 2,14,38,634-00 ರೂ.ಗಳು ವೆಚ್ಚವಾಗಿವೆ.

ಆ) ಹೌದು.

ಇ) 1992ರ ನವೆಂಬರ್ ತಿಂಗಳಿನ ಅಂತ್ಯದವರೆಗೆ 2,21,78,594-00ರೂ.ಗಳು ವಸೂಲಾಗಿದೆ.

ಈ) ಪ್ರಸಕ್ತ ಸಾಲಿನಲ್ಲಿ 6-7-92ರಿಂದ ಈ ಸೇತುವೆಯ ಮೇಲೆ ತೆರಿಗೆ ಹಣ ವಸೂಲು ಮಾಡಲು ಶ್ರೀ ಎನ್.ಹೆಚ್. ಕೋನರೆಡ್ಡಿ, ಗುತ್ತಿಗೆದಾರರು, ಚಿಲಕವಾಡ, ನವಲಗುಂದ ಇವರಿಗೆ ಗುತ್ತಿಗೆ ನೀಡಲಾಗಿದೆ. ಈ ಗುತ್ತಿಗೆಯ ಅವಧಿಯು 31-3-93ರಂದು ಮುಗಿಯುತ್ತದೆ.

ಉ) ಈ ತರಹದ ಪ್ರಕರಣಗಳು ಈವರೆವಿಗೂ ವರದಿಯಾಗಿಲ್ಲ.

ಊ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಮತೀರ್ಥ ಹೊಳೆಗೆ ಕಟ್ಟಿದ ಸೇತುವೆ ಕೊಚ್ಚಿ ಹೋಗಿರುವ ಬಗ್ಗೆ

519 - ಶ್ರೀಮತಿ ಸುಮಾವಸಂತ (ವಿರಾಜಪೇಟೆ) : ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯ ವೀರಾಜಪೇಟೆ ತಾಲ್ಲೂಕು, ಶ್ರೀಮಂಗಲ ಮಂಡಲ ವ್ಯಾಪ್ತಿಗೆ ಬರುವ ಹೇರ್ಡಾಡು ದೇವಸ್ಥಾನದ ಪಕ್ಕ ರಾಮತೀರ್ಥ ಹೊಳೆಗೆ ಕಟ್ಟಿದ ಸೇತುವೆಯ ಎರಡೂ ಬದಿ ಮಳೆಗೆ ಕೊಚ್ಚಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಆ ಬಗ್ಗೆ ಏನು ಕ್ರಮ ತೆಗೆದುಕೊಳ್ಳಲಾಗಿದೆ?

ಇ) ಕಾಮಗಾರಿ ಕೆಲಸವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಮಂತ್ರಿಗಳು) :

ಅ) ರಾಮತೀರ್ಥ ಹೊಳೆಗೆ ಹೆರ್ಡಾಡು ದೇವಸ್ಥಾನದ ಬಳಿ ಇರುವ ಸೇತುವೆಯ ಎರಡೂ ಬದಿಗಳಿಗೆ ಅತಿವೃಷ್ಟಿಯಿಂದ ಸುಮಾರು 50,000 ರೂ.ಗಳಷ್ಟು ಹಾನಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸಂಚಾರಕ್ಕೆ ತೊಂದರೆ ಆಗದಂತೆ ಕಾರ್ಯ ನಿರ್ವಹಿಸಲಾಗಿದ್ದು, ಅತಿವೃಷ್ಟಿ ಪರಿಹಾರ ಅನುದಾನ ದೊರೆತನಂತರ ಸಂಪೂರ್ಣ ದುರಸ್ತಿ ಮಾಡಲಾಗುವುದು.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಸಿರಾ ನೆಲ್ಲಿಗೆರೆ ರಸ್ತೆಯಲ್ಲಿರುವ ಸೇತುವೆ ದುರಸ್ತಿ

557 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯ್ಕನಹಳ್ಳಿ ತಾಲ್ಲೂಕು, ಬೆಳ್ಳಾರ ಗ್ರಾಮದ ಸಿರಾ-ನೆಲ್ಲಿಗೆರೆ ರಸ್ತೆಯಲ್ಲಿರುವ ಸೇತುವೆಯು ಅಪಾಯದ ಅಂಚಿನಲ್ಲಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅದರ ದುರಸ್ತಿಗಾಗಿ ಸರ್ಕಾರದವರು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಸೇತುವೆ ದುರಸ್ತಿ ಕಾರ್ಯ ಕೈಗೊಂಡಿದ್ದು ಜನವರಿ 1993 ರ ಅಂತ್ಯದಲ್ಲಿ ಪೂರ್ಣಗೊಳಿಸಲಾಗುವುದು.

ತುಮಕೂರು ಜಿಲ್ಲೆಯಲ್ಲಿ ನೀರು ಸರಬರಾಜು ಯೋಜನೆ

913 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ತುಮಕೂರು ಜಿಲ್ಲೆಯಲ್ಲಿ ನೀರು ಸರಬರಾಜು ಯೋಜನೆಯಡಿಯಲ್ಲಿ ನಿಗಧಿಪಡಿಸುವ ಅನುದಾನವೆಷ್ಟು?

2) ನೀರು ಸರಬರಾಜು ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗಿರುವ ಅನುದಾನ ಹಾಗೂ ವಿಶೇಷವಾಗಿ ಕಿರುನೀರು ಸರಬಾರಾಜು ಯೋಜನೆಗಳನ್ನು ಪೂರೈಸಲು ಬೇಕಾಗುವ ಅನುಬಾನವೆಷ್ಟು?

3) 199-93ನೇ ಸಾಲಿನಲ್ಲಿ ಕಳ್ಳಂಬೆಳ್ಳ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕಿರುನೀರು ಸರಬರಾಜು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ.

4) ಈ ಎಲ್ಲಾ ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಸರಕಾರವು ಪೂರ್ಣಗೊಳಿಸುವುದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು) :

ಅ) ರೂ. 303.50 ಲಕ್ಷಗಳು.

ಆ) ನೀರು ಸರಬರಾಜು ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗುವ ಅನುದಾನ ರೂ. 359.50 ಲಕ್ಷಗಳು. ಇದರಲ್ಲಿ ಕಿರು ನೀರು ಸರಬರಾಜು ಯೋಜನೆಗಳನ್ನು ಪೂರ್ಣಸಲು ಬೇಕಾಗುವ ಅನುದಾನ ರೂ. 83.74 ಲಕ್ಷಗಳು.

ಇ) 11.

ಈ) ಹೌದು.

ನೆಲಮಂಗಲ ಟೌನ್‌ನಲ್ಲಿ ನ್ಯಾಯಾಲಯದ ಕಟ್ಟಡ.

61 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲದಲ್ಲಿರುವ ಹಾಲಿ ಮುನ್ಸಿಫ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಬಾಡಿಗೆ ಕೊಠಡಿಯಲ್ಲಿ ನಡೆಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

ಆ) ಹಾಗಿದ್ದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಪ್ರತ್ಯೇಕವಾದ ದೊಡ್ಡ ಕಟ್ಟಡ ನಿರ್ಮಿಸಲು ಸರ್ಕಾರವು ಸೂಕ್ತ ಕ್ರಮಕೈಗೊಳ್ಳುವುದೇ?

ಶ್ರೀ ಹಾರನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :